# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಾದ್ಯಂತ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಸ್ಥಾಪಿಸಲಾಗಿರುವ ಮಾಹಿತಿ ಕೇಂದ್ರಗಳಿಗೆ **"ಮೌಲಾನಾ ಅಜಾದ್ ಅಲ್ಪಸಂಖ್ಯಾತರ ಭವನ್"** ಎಂದು ನಾಮಕರಣ ಮಾಡುವ ಬಗ್ಗೆ.

**ಓದಲಾಗಿದೆ:**
1) 2013–14ನೇ ಸಾಲಿನ ಆಯವ್ಯಯ ಭಾಷಣ.
2) ಸರ್ಕಾರಿ ಆದೇಶ ಸಂಖ್ಯೆ ಎಂ.ಡಬ್ಲ್ಯೂಡಿ/400/ಎಂಡಿಎಸ್/2013, ದಿ: 07.09.2013.
3) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ. ವಕ್ಫ್ ಹಾಗೂ ಪೌರಾಡಳಿತ ಸಚಿವರ ಅಧ್ಯಕ್ಷತೆಯಲ್ಲಿ ದಿ:10.12.2013ರ ಸಭೆಯ ನಡವಳಿಗಳು.
4) ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಏಕ ಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ಮಾಕೇಂ/ಸಿಆರ್–01/2014–15, ದಿ: 15.05.2014.

*****

**ಪ್ರಸ್ತಾವನೆ:–**

ಮೇಲೆ ಓದಲಾದ (1) ರಲ್ಲಿ 2013–14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಪ್ರತಿ ಜಿಲ್ಲೆಗೊಂದು ಅಲ್ಪಸಂಖ್ಯಾತರ ಕಲ್ಯಾಣ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲು ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶ ಸಂಖ್ಯೆ MWD 400 MDS 2013 ರ ದಿನಾಂಕ 07.09.2013 ರಂದು ಸರ್ಕಾರಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ (3)ರಲ್ಲಿ ಈಗಾಗಲೆ ಪ್ರತಿ ಜಿಲ್ಲಾ ಕೇಂದ್ರಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು ಅದಕ್ಕೆ **"ಮೌಲಾನಾ ಅಜಾದ್ ಅಲ್ಪಸಂಖ್ಯಾತರ ಭವನ್"** ಎಂದು ನಾಮಕರಣ ಮಾಡಲು ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್ ಮತ್ತು ಪೌರಾಡಳಿತ ಸಚಿವರ ಅಧ್ಯಕ್ಷತೆಯಲ್ಲಿ ದಿ: 10.12.2013ರ ರಂದು ನಡೆದ ಪ್ರಗತಿ ಪರಿಶೀಲನಾ ಸಭೆಯ ನಡವಳಿಯಲ್ಲಿ ಸೂಚಿಸಿರುವುದರಿಂದ, ಸದರಿ ಕೇಂದ್ರಗಳಿಗೆ **"ಮೌಲಾನಾ ಅಜಾದ್ ಅಲ್ಪಸಂಖ್ಯಾತರ ಭವನ್"** ಎಂದು ನಾಮಕರಣ ಮಾಡಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸಲು ಮೇಲೆ (4)ರಲ್ಲಿ ಓದಲಾದ ಪತ್ರದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಸರ್ಕಾರಕ್ಕೆ ಏಕಕಡತ ಪದ್ಧತಿಯನ್ವಯ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: MWD 271 MDS 2014, ದಿನಾಂಕ:01-08-2014**

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಅಲ್ಪಸಂಖ್ಯಾತರ ನಿರ್ದೇಶನಾಲಯ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಹಾಗೂ ಕರ್ನಾಟಕ ರಾಜ್ಯ ವಕ್ಫ್ ಸಮಿತಿಯ ಕಛೇರಿಗಳಿಗಾಗಿ ಅಲ್ಪಸಂಖ್ಯಾತರ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸುವ ಮಾಹಿತಿ ಕೇಂದ್ರ ಯೋಜನೆಯಡಿ ರಾಜ್ಯದ ಕೇಂದ್ರ ಕಛೇರಿ ಹಾಗೂ ಪ್ರತಿ ಜಿಲ್ಲೆಯಲ್ಲಿ ರೂ.1.00 ಕೋಟಿ ವೆಚ್ಚದಲ್ಲಿ ಒಂದು ಆಡಳಿತ ಸಂಕೀರ್ಣ ಭವನವನ್ನು ನಿರ್ಮಿಸಿ ಅದಕ್ಕೆ **"ಮೌಲಾನಾ ಅಜಾದ್ ಅಲ್ಪಸಂಖ್ಯಾತರ ಭವನ್"** ಎಂದು ಹೆಸರಿಡಲು ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ. ನಾಗರತ್ನ)
ಸರ್ಕಾರದ ಉಪಕಾರ್ಯದರ್ಶಿ.
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.

ಪ್ರತಿ:

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ವಿ.ವಿ.ಗೋಪುರ, ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಗುಲ್ಬರ್ಗ, ಬೆಳಗಾಂ.
5. ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
6. ಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಹಜ್ ಸಮಿತಿ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
8. ಅಧ್ಯಕ್ಷರು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಆಪ್ತ ಕಾರ್ಯದರ್ಶಿಗಳು
9. ಅಧ್ಯಕ್ಷರು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
10. ರಾಜ್ಯದ ಎಲ್ಲಾ ಜಿಲ್ಲಾ ವಕ್ಫ್ ಸಲಹಾ ಸಮಿತಿ ಅಧ್ಯಕ್ಷರುಗಳು.
11. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
12. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
13. ರಾಜ್ಯದ ಎಲ್ಲಾ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ/ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ. (ನಿರ್ದೇಶಕರು ರವರ ಮೂಲಕ)
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9) ವಿಧಾನ ಸೌಧ, ಬೆಂಗಳೂರು.
15. ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನಾ ಇಲಾಖೆ
16. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರ ಆಪ್ತ ಕಾರ್ಯದರ್ಶಿ,
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.